# <u>ಅಭ್ಯರ್ಥಿಗಳಿಗೆ ಸೂಚನೆಗಳು</u>

ಲೋಕೋಪಯೋಗಿ ಇಲಾಖೆಯಲ್ಲಿನ ಕಿರಿಯ ಅಭಿಯಂತರರು ಹುದ್ದೆಗಳ ನೇಮಕಾತಿ ಸಂಬಂಧ ದಿನಾಂಕ: 13-12-2021 ರಂದು ನಡೆದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರಗಳನ್ನು ಪ್ರಕಟಿಸಲಾಗಿದ್ದು, ಸದರಿ **"ಕೀ ಉತ್ತರಗಳಿಗೆ ಆಕ್ಷೇಪಣೆಗಳನ್ನು ದಿನಾಂಕ:12-01-2022ರಂದು ಸಂಜೆ 5:30ರೊಳಗಾಗಿ** ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು-560001 ಈ ವಿಳಾಸಕ್ಕೆ ಮಾತ್ರ ತಲುಪುವಂತೆ ಕಳುಹಿಸಿಕೊಡಬೇಕು. ಆಕ್ಷೇಪಣೆಗಳನ್ನು ಸ್ವೀಕರಿಸುವ **ಕೊನೆಯ ದಿನಾಂಕ:12-01-2022ರ ಸಂಜೆ 5:30 ಆಗಿದ್ದು, ಈ ಅವಧಿಯ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು." ಅಭ್ಯರ್ಥಿಗಳ ಆಕ್ಷೇಪಣೆಗಳು ಅಂಚೆಯ ಮೂಲಕ ಆಯೋಗಕ್ಕೆ ತಲುಪಲು ವಿಳಂಬವಾದಲ್ಲಿ ಕೆ.ಪಿ.ಎಸ್.ಸಿ.ಯು ಜವಾಬ್ದಾರಿಯಾಗಿರುವುದಿಲ್ಲ.**

1. ಆಕ್ಷೇಪಣೆಗಳ ವಿವರಗಳನ್ನು ಕಡ್ಡಾಯವಾಗಿ ಆಯೋಗದ ಅಂತರ್ಜಾಲ ತಾಣದಲ್ಲಿ ಪ್ರಕಟಿಸಿರುವ ನಮೂನೆಯಲ್ಲಿಯೇ (ಕನ್ನಡ ಅಥವಾ ಇಂಗ್ಲೀಷ್) ಸಲ್ಲಿಸಬೇಕು ಹಾಗೂ ಇದರೊಂದಿಗೆ ಪ್ರತಿ ಪ್ರಶ್ನೆಗೆ ರೂ.50/-ರಂತೆ ಶುಲ್ಕವನ್ನು (ಐ.ಪಿ.ಓ ಅಥವಾ ಡಿ.ಡಿ. ಮೂಲಕ) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು, ಇವರ ಹೆಸರಿಗೆ ಸಂದಾಯ ಮಾಡಬೇಕು.

2. ಅಭ್ಯರ್ಥಿಯು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಿರುವ ಕೀ-ಉತ್ತರಗಳನ್ನೊಳಗೊಂಡ ಪ್ರಶ್ನೆಪತ್ರಿಕೆಯಲ್ಲಿ ನಮೂದಿಸಲಾದ ಪ್ರಶ್ನೆ ಸಂಖ್ಯೆಯನ್ನು ಮತ್ತು ಪ್ರಶ್ನೆ ಐಡಿ ಸಂಖ್ಯೆ (Question Id)ಯನ್ನೇ ಕಡ್ಡಾಯವಾಗಿ ನಮೂದಿಸುವುದು.

3. ಶುಲ್ಕ ಸಂದಾಯ ಮಾಡದ ಆಕ್ಷೇಪಣಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

4. ಪ್ರತಿ ಪ್ರಶ್ನೆಯ ಕೀ ಉತ್ತರಕ್ಕೆ ಸಲ್ಲಿಸುವ ಆಕ್ಷೇಪಣೆಗಳಿಗೆ ಪೂರಕವಾಗಿ ದ್ವಿಪ್ರತಿಯಲ್ಲಿ ಸಲ್ಲಿಸುವ ದಾಖಲೆಗಳಿಗೆ ಸಂಬಂಧಿಸಿದಂತೆ ಲೇಖಕರ ಹೆಸರು, ಪ್ರಕಾಶನದ ಪ್ರತಿ ಇತ್ಯಾದಿ ವಿವರಗಳನ್ನು ಆಕ್ಷೇಪಣೆಗಳೊಂದಿಗೆ ನಮೂನೆಯಲ್ಲಿ ನಮೂದಿಸತಕ್ಕದ್ದು.

5. ದಾಖಲೆಗಳನ್ನು ದ್ವಿಪ್ರತಿಯಲ್ಲಿ ಹಾಗೂ ನಿಗದಿತ ನಮೂನೆಯಲ್ಲಿ ಸಲ್ಲಿಸದ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು.

6. ದಾಖಲೆಗಳ ಪ್ರತಿ ಪುಟದ ಮೇಲೆ ಪ್ರಶ್ನೆ ಸಂಖ್ಯೆ ಮತ್ತು ನೋಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಬರೆಯತಕ್ಕದ್ದು.

7. ಆಕ್ಷೇಪಣೆಯೊಂದಿಗೆ ಅಭ್ಯರ್ಥಿಯು ದೃಢೀಕರಿಸಿದ ಪ್ರವೇಶ ಪತ್ರದ ಪ್ರತಿಯನ್ನು ಪರಿಶೀಲನೆಗಾಗಿ ಲಗತ್ತಿಸಬೇಕು.

ಸಹಿ/-
ಪರೀಕ್ಷಾ ನಿಯಂತ್ರಕರು(ಪ್ರ)
ಕರ್ನಾಟಕ ಲೋಕಸೇವಾ ಆಯೋಗ,
ಬೆಂಗಳೂರು.